**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

# O.S. No. 475/2023

| | | |
|---|---|---|
| ಸಾಕ್ಷಿದಾರರ ಹೆಸರು | : | ಬೋರೇಗೌಡ |
| ತಂದೆಯ ಹೆಸರು | : | ಕೆ. ಬೋರೇಗೌಡ |
| ವಯಸ್ಸು | : | 59 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಗೋಪಾಲಪುರ ಗ್ರಾಮ, ಹೆಚ್.ಡಿ. ಕೋಟೆ ತಾ. |

**ಸಾಕ್ಷಿಯನ್ನು ದಿನಾಂಕಃ 25.09.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿಗಳ ಪರ ಶ್ರೀ. ಬಿ.ವಿ.ಎಸ್. ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ 2 ನೇ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ದಿನಾಂಕಃ 14.09.1981ರ ಕ್ರಯ ಪತ್ರದ ಧೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-1 ಎಂದು ಗುರುತಿಸಲಾಯಿತು.

ಎಂ.ಆರ್. ನಕಲಿನ ಧೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-2 ಎಂದು ಗುರುತಿಸಲಾಯಿತು.

03 ಕೈ-ಬರವಣಿಗೆಯ ಪಹಣಿ ಪತ್ರಿಕೆಗಳ ಧೃಡೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-3 ರಿಂದ ನಿ.ಪಿ.-5 ಎಂದು ಗುರುತಿಸಲಾಯಿತು.

01 ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-6 ಎಂದು ಗುರುತಿಸಲಾಯಿತು.

02 ಕಂದಾಯ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-7 ಮತ್ತು ನಿ.ಪಿ.-8 ಎಂದು ಗುರುತಿಸಲಾಯಿತು.

ಹೆಚ್.ಡಿ. ಕೋಟೆ ಪೋಲೀಸ್ ಠಾಣೆಯವರು ನೀಡಿರುವ ಹಿಂಬರಹವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-9 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರಾಗಿರುತ್ತಾರೆ ಮತ್ತು ಯಾವುದೇ ಲಿಖಿತ ಹೇಳಿಕೆ ಸಲ್ಲಿಸಿರುವುದಿಲ್ಲ, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**